# ಎನ್ನೆಂಸಿ: ಯುವ ರೆಡ್‌ಕ್ರಾಸ್ ಘಟಕದ ವತಿಯಿಂದ ರಕ್ತದಾನಿ ಪಿ ಬಿ ಸುಧಾಕರರೈಗೆ ಸನ್ಮಾನ

ಸುಳ್ಯದ ನೆಹರೂ ಮೆಮೋರಿಯಲ್ ಕಾಲೇಜಿನ ಯುವ ರೆಡ್‌ಕ್ರಾಸ್‌ಘಟಕದ ವತಿಯಿಂದ 105ಕ್ಕೂ ಅಧಿಕ ಬಾರಿ ರಕ್ತದಾನ ಮಾಡಿ ಕರ್ನಾಟಕ ರಾಜ್ಯದಲ್ಲಿಯೇ ಪ್ರಥಮ ಸ್ಥಾನದಲ್ಲಿರುವ ಸುಳ್ಯದ ವರ್ತಕರ ಸಂಘದ ಅಧ್ಯಕ್ಷ ಪಿ ಬಿ ಸುಧಾಕರ ರೈಯವರನ್ನು ಸನ್ಮಾನಿಸಲಾಯಿತು.

ಸನ್ಮಾನಿಸಿದ ಕಾಲೇಜಿನ ಪ್ರಾಂಶುಪಾಲ ಡಾ. ಕೆ ಗಿರಿಧರ ಗೌಡ ಮಾತನಾಡಿ, ಕಾಲೇಜು ದಿನಗಳಿಂದಲೇ ಹಲವು ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಕ್ರೀಡಾಚಟುವಟಿಕೆಯಲ್ಲಿ ಮುಂಚೂಣಿಯಲ್ಲಿದ್ದವರು. ಇಂದು ರಕ್ತದಾನ ಮಾಡುವ ಮೂಲಕ ಜನರ ಸೇವೆಗೆ ನಿಂತು ಎಲ್ಲರೂ ಮೆಚ್ಚುವ ಕೆಲಸ ಮಾಡುತ್ತಿದ್ದಾರೆ ಎಂದರು.

ಸನ್ಮಾನ ಸ್ವೀಕರಿಸಿದ ವರ್ತಕರ ಸಂಘದ ಅಧ್ಯಕ್ಷ, ರಕ್ತದಾನಿ ಪಿ ಬಿ ಸುಧಾಕರರೈ ಮಾತನಾಡಿ, ನನ್ನೆಲ್ಲ ಕೆಲಸಗಳಿಗೆ ನನ್ನ ಮನೆಯೇ ನನಗೆ ಪ್ರೇರಣೆ, ಕಷ್ಟಕ್ಕೆ ಸ್ಪಂದಿಸುವ ನಿಟ್ಟಿನಲ್ಲಿ ಸಮಾಜಮುಖಿ ಕೆಲಸಗಳಲ್ಲಿ ತೊಡಗಿಸಿಕೊಳ್ಳಿ. ರಕ್ತಕ್ಕೆ ರಕ್ತವೇ ಪರ್ಯಾಯ. ಹಾಗಾಗಿ ಅನಿವಾರ್ಯವಾದಾಗ ರಕ್ತನೀಡುವ ಕಿಂಚಿತ್ ಸೇವೆ ಮಾಡುತ್ತಿದ್ದೇನೆ. 40 ವರ್ಷಗಳಿಂದ ನಿರಂತರವಾಗಿ ಈ ಸೇವೆಯಲ್ಲಿ ತೊಡಗಿಸಿಕೊಂಡಿದ್ದು ಮನಸ್ಸಿನಲ್ಲಿ ಸಂತೃಪ್ತ ಭಾವ ಇದೆ ಎಂದರು. ಪ್ರಗತಿಪರ ಕೃಷಿಕ ಪಿ ಬಿ ಪ್ರಭಾಕರ ರೈ, ನಿವೃತ್ತ ಮುಖ್ಯೋಪಾಧ್ಯಾಯ ಜತ್ತಪ್ಪ ಎ ಕೆ. ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದರು. ಕಾರ್ಯಕ್ರಮಾಧಿಕಾರಿ ಡಾ. ಅನುರಾಧಾ ಕುರುಂಜಿಯವರು ಮಾತನಾಡಿ, ಮಕ್ಕಳಿಗೆ ರಕ್ತದಾನದ ಬಗ್ಗೆ ಪ್ರೇರಣೆ ಮೂಡಿಸುವ ಹಾಗೂ ಸಾಧಕರಿಗೆ ಇನ್ನಷ್ಟು ಸಾಧನೆಗೆ ಉತ್ತೇಜನವಾಗಲಿ ಎನ್ನುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಎಂದರು

ಕಾರ್ಯಕ್ರಮದಲ್ಲಿ ಪವಿತ್ರ ಪ್ರಭಾಕರ ರೈ, ಪ್ರಾಪ್ತಿ ಪಿ ರೈ, ಘಟಕದ ಹಿರಿಯ ಸದಸ್ಯರಾದ ದೀಕ್ಷಿತ್, ಗಣೇಶ್, ತೇಜಸ್ ಉಪಸ್ಥಿತರಿದ್ದರು. ಮೌನ, ಕೃತಿ, ತೇಜಸ್ವಿನಿ ಪ್ರಾರ್ಥಿಸಿದ ಕಾರ್ಯಕ್ರಮದಲ್ಲಿ ಹವ್ಯಾ ಸ್ವಾಗತಿಸಿ, ಡಯಾನಾ ವಂದಿಸಿದರು. ಸ್ವಾತಿ ಕಾರ್ಯಕ್ರಮ ನಿರೂಪಿಸಿದರು.